**CC 1143/2017**

**ಪ್ರಧಾನ ದಿವಾಣಿ ನ್ಯಾಯಾಧೀಶರು ಮತ್ತು ಪ್ರ.ದ.ನ್ಯಾ.ದಂ. ಗಳ ನ್ಯಾಯಾಲಯ, ಹೊಸಪೇಟೆ.**

**ಸಿಸಿ ನಂಬರ್ 1143/2017**

**ಸಿ ಡಬ್ಲೂ - 10**
**ಪಿ ಡಬ್ಲೂ - 7**

**ಸಾಕ್ಷಿಯ ಹೆಸರು - ರಾಜೇಶ**

**ತಂದೆಯ ಹೆಸರು - ಮುತ್ತಯ್ಯ**

**ವಯಸ್ಸು - 40 ವರ್ಷಗಳು**

**ಉದ್ಯೋಗ - ಎಲೆಕ್ಟ್ರೀಶಿಯನ್**

**ವಾಸಸ್ಥಳ - ಶಿವಮೊಗ್ಗ**

**ಸಾಕ್ಷಿಯನ್ನು ದಿನಾಂಕಃ 14-03-2025 ರಂದು ಪ್ರಾಮಾಣೀಕರಿಸಲಾಯಿತು.**

**ಮುಖ್ಯ ವಿಚಾರಣೆಃ ಎ. ಪಿ. ಪಿ. ಅವರಿಂದ**

ಈಗ ನಾನು ನೋಡುತ್ತಿರುವ ದಾಖಲೆಯಲ್ಲಿನ ಸಹಿ ನನ್ನದೇ ಆಗಿರುತ್ತದೆ. ಸಾಕ್ಷಿ ಕೃತ್ಯ ಸ್ಥಳ ಪಂಚನಾಮೆಯಲ್ಲಿನ ಸಹಿ ನೋಡಿ ಗುರುತಿಸಿರುತ್ತಾರೆ. ಸದರಿ ಪಂಚನಾಮೆಯನ್ನು ಈಗಾಗಲೇ ನಿಪಿಃ 25 ಎಂದು ಗುರುತಿಸಲಾಗಿದೆ. ಸಾಕ್ಷಿಯ ಸಹಿಯನ್ನು ನಿಪಿಃ 25 (ಬಿ) ಎಂದು ಗುರುತಿಸಲಾಯಿತು. ಸದರಿ ಸಹಿಯನ್ನು 7-8 ವರ್ಷಗಳ ಹಿಂದೆ ಹೊಸಪೇಟೆ ಪಟ್ಟಣ ಪೋಲಿಸ ಠಾಣೆಯಲ್ಲಿ ಮಾಡಿರುತ್ತೇನೆ. ನನ್ನೊಂದಿಗೆ ಚಾಸಾ -11 ರವರು ಹಾಜರು ಇದ್ದರು. ಪೋಲಿಸರು ನನ್ನ ಸಮಕ್ಷಮ ಯಾವುದೇ ಪಂಚನಾಮೆ ಕ್ರಮ ಜರುಗಿಸಿಲ್ಲ. ಪ್ರಕರಣದ ಆರೋಪಿಯನ್ನು ನಾನು ನೋಡಿರುವುದಿಲ್ಲ.

ಈಗ ನಾನು ನೋಡುತ್ತಿರುವ **2** ಪೋಟೋಗಳಲ್ಲಿನ ವ್ಯಕ್ತಿ ನಾನೇ ಇರುತ್ತೇನೆ. ಸದರಿ ಪೋಟೋಗಳನ್ನು ಒಟ್ಟಾಗಿ ಈಗಾಗಲೇ ನಿಪಿಃ **26** ಎಂದು ಗುರುತಿಸಲಾಗಿದೆ. ನಿಪಿಃ **26** ರ ಪೋಟೋವನ್ನು ಯಾವ ಕಾರಣಕ್ಕಾಗಿ ತೆಗೆದಿರುತ್ತಾರೆ ಎಂದು ನನಗೆ ಗೊತ್ತಿಲ್ಲ.

**(ಈ ಹಂತದಲ್ಲಿ ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿ ಎಂದು ಪರಿಗಣಿಸಿ ಪಾಟೀಸವಾಲು ಮಾಡಲು ಮಾನ್ಯ ಎ.ಪಿ.ಪಿ. ಅವರು ಅನುಮತಿ ಕೇಳಿದ್ದು, ಅನುಮತಿಯನ್ನು ನೀಡಲಾಯಿತು.)**

## ಪಾಟೀ ಸವಾಲು ಮಾನ್ಯ ಎ ಪಿ ಪಿ ಅವರಿಂದಃ

ದಿಃ 20-02-2017 ರಂದು ಮಧ್ಯಾಹ್ನ 02-30 ಗಂಟೆಗೆ ಪಟ್ಟಣ ಪೋಲಿಸ ಠಾಣೆಗೆ ನನ್ನನ್ನು ಮತ್ತು ಚಾಸಾ -11 ರವನ್ನು ಕರೆದು 2 ನೇ ಆರೋಪಿಯನ್ನು ತೋರಿಸಿದ್ದರು ಅಂದರೆ ಸರಿಯಲ್ಲ. ಸದರಿ ಆರೋಪಿ ಪ್ರಕರಣದ ಪಿರ್ಯಾದುದಾರರ ಗಂಡನಿಗೆ ಸೇರಿದ ರಾಧಾ ಕೃಷ್ಣ ಆಟೋ ಮೋಬೈಲ್ಸ್ ಅಂಗಡಿಯನ್ನು ತಾನು ಮತ್ತು ಇತರೆ ಆರೋಪಿತರು ಕಳ್ಳತನ ಮಾಡಿರುವುದಾಗಿ ನಮ್ಮ ಮುಂದೆ ಹೇಳಿಕೆ ನೀಡಿದ್ದ ಅಂದರೆ ಸರಿಯಲ್ಲ. ಸದರಿ ಆರೋಪಿ ನಮ್ಮನ್ನು ಮತ್ತು ಪೋಲಿಸರನ್ನು ತಾನು ಕಳ್ಳತನ ಮಾಡಿದ ಕೃತ್ಯ ಸ್ಥಳಕ್ಕೆ ಕರೆದುಕೊಂಡು ಹೋಗಿದ್ದ ಅಂದರೆ ಸರಿಯಲ್ಲ. ಸದರಿ ಸ್ಥಳದಲ್ಲಿ ಪೋಲಿಸರು ಮಧ್ಯಾಹ್ನ 02-30 ರಿಂದ 03-30 ರವರೆಗೆ ನಿಪಿಃ 25 ರಂತೆ ಪಂಚನಾಮೆ ಕ್ರಮ ಜರುಗಿಸಿರುತ್ತಾರೆ ಅಂದರೆ ಸರಿಯಲ್ಲ. ನಿಪಿಃ 25 ಕ್ಕೆ ನಾನು ಸ್ಥಳದಲ್ಲಿ ಸಹಿ ಮಾಡಿದ್ದೆ ಅಂದರೆ ಸರಿಯಲ್ಲ. ನಿಪಿಃ 26 ರ ಪೋಟೋಗಳನ್ನು ಆಗಲೇ ತೆಗೆಯಲಾಗಿತ್ತು ಅಂದರೆ ಸರಿಯಲ್ಲ.

**CC 1143/2017**
**ಸಿ ಡಬ್ಲೂ - 10**
**ಪಿ ಡಬ್ಲೂ - 7**

ನನ್ನ ಸಮಕ್ಷಮ 2 ನೇ ಆರೋಪಿ ತೋರಿಸಿದ ಸ್ಥಳದಲ್ಲಿ ನಿಪಿಃ 25 ರಂತೆ ಪಂಚನಾಮೆ ಕರಮ ಜರುಗಿಸಿದ್ದರೂ ಸಹ ಆರೋಪಿತರಿಗೆ ಸಹಾಯ ಮಾಡಲು ಸುಳ್ಳು ಸಾಕ್ಷ್ಯ ನುಡಿಯುತ್ತಿದ್ದೇನೆ ಅಂದರೆ ಸರಿಯಲ್ಲ.

**ಪಾಟೀ ಸವಾಲು ಆರೋಪಿ ಪರ ಶ್ರೀ ಕೆ ಜಿ ಪಿ ಆರ್., ವಕೀಲರಿಂದಃ**

ಇಲ್ಲಾ.

ಮರುವಿಚಾರಣೆ ಇಲ್ಲ.

(ನನ್ನ ಉಕ್ತಲೇಖನದಂತೆ ತೆರೆದ ನ್ಯಾಯಾಲಯದಲ್ಲಿ ಬೆರಳಚ್ಚು ಮಾಡಲಾಯಿತು.)

ಓ. ಹೆ. ಕೇ. ಸರಿ ಇದೆ.

ಪ್ರಧಾನ ದಿವಾಣಿ ನ್ಯಾಯಾಧೀಶರು
ಹಾಗೂ ಜೆ.ಎಂ.ಎಫ್.ಸಿ., ಹೊಸಪೇಟೆ.